# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1130
ಸದಸ್ಯರ ಹೆಸರು : ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 15-12-2023.
ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯ ಸರ್ಕಾರದ 5 ಗ್ಯಾರಂಟಿಗಳ ಪೈಕಿ ಒಂದಾದ ಗೃಹಲಕ್ಷ್ಮಿ ಯೋಜನೆಯಡಿ ರಾಜ್ಯದ ಅರ್ಹ ಮಹಿಳೆಯರಿಗೆ ಮಾಸಿಕ ರೂ.2,000 ನೀಡುವುದಾಗಿ ಸರ್ಕಾರ ಆದೇಶ ಮಾಡಲಾಗಿದ್ದು, ಇಲ್ಲಿಯವರೆಗೆ ರಾಜ್ಯದ ಅರ್ಹ ಮಹಿಳೆಯರಿಗೆ 02 ತಿಂಗಳ ಕಂತು ಮಾತ್ರ ತಲುಪಿದ್ದು, ನಂತರದ ತಿಂಗಳುಗಳಲ್ಲಿ ಬಾರದಿರುವ ಬಗ್ಗೆ ಅರ್ಹ ಮಹಿಳೆಯರಿಂದ ದೂರು ಕೇಳಿ ಬರುತ್ತಿದ್ದು ಮತ್ತು ಕೆಲವು ಕಡೆಗಳಲ್ಲಿ ಸರ್ಕಾರದ ವಿರುದ್ಧ ಪ್ರತಿಭಟನೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗೃಹಲಕ್ಷ್ಮೀ ಯೋಜನೆಯಡಿ ನೊಂದಾಯಿಸಲ್ಪಟ್ಟಿರುವ ಫಲಾನುಭವಿಗಳ ಪೈಕಿ ಕೆಲವು ಫಲಾನುಭವಿಗಳಿಗೆ ಮಾತ್ರ ಧನ ಸಹಾಯ ಪಾವತಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.<br><br>ಫಲಾನುಭವಿಗಳ ಬ್ಯಾಂಕ್ ಖಾತೆ ಆಧಾರ್ ಸಂಖ್ಯೆಗೆ ಜೋಡಣೆಯಾಗದಿರುವುದು, E-KYC, UPDATE, ID validation, Account Not Seeded, ಇತ್ಯಾದಿ., ಕಾರಣಗಳಿಂದ ಹಣ ಜಮೆ ಆಗಿರುವುದಿಲ್ಲ.<br><br>ಈ ಯೋಜನೆಯಡಿ ನೊಂದಾಯಿಸಲಾದ ಕೆಲವು ಫಲಾನುಭವಿಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಫಲಾನುಭವಿಗಳಿಗೆ ಆಗಸ್ಟ್, ಸೆಪ್ಟಂಬರ್, ಅಕ್ಟೋಬರ್ ಮತ್ತು ನವೆಂಬರ್ ತಿಂಗಳ ಧನ ಸಹಾಯವನ್ನು ನೇರ ನಗದು ವರ್ಗಾವಣೆ ಮೂಲಕ ಪಾವತಿಸಲು ಈಗಾಗಲೇ ಅನುದಾನ ಬಿಡುಗಡೆ ಮಾಡಲಾಗಿದೆ. |
| ಆ. | ಈ ಕಾರ್ಯಕ್ರಮಕ್ಕೆ ಸರ್ಕಾರ ಯಾವ ಯಾವ ಇಲಾಖೆಗಳಿಂದ ಹಣವನ್ನು ಕ್ರೂಢೀಕರಿಸಲಾಗುತ್ತದೆ; (ಸಂಪೂರ್ಣ ಮಾಹಿತಿ ನೀಡುವುದು) | 2023-24ನೇ ಸಾಲಿನ ಆಯವ್ಯಯದಲ್ಲಿ ಇಲಾಖೆಯಡಿಯಲ್ಲಿ ಗೃಹಲಕ್ಷ್ಮಿ ಯೋಜನೆಗೆ ರೂ.1750000.00 ಲಕ್ಷ ಅನುದಾನ ಒದಗಿಸಲಾಗಿದೆ. |
| ಇ. | ಪ್ರತಿ ತಿಂಗಳು ಕ್ರಮಬದ್ಧವಾಗಿ ಅರ್ಹ ಮಹಿಳೆಯರಿಗೆ ಹಣ ತಲುಪುವಂತೆ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?<br>(ಮಾಹಿತಿ ನೀಡುವುದು) | ಪ್ರತಿ ತಿಂಗಳು 15ನೇ ತಾರೀಖಿನವರೆಗೆ ನೋಂದಣಿಯಾದ ಎಲ್ಲಾ ಫಲಾನುಭವಿಗಳಿಗೆ ತಕ್ಷಣ ಹಣ ಜಮೆ ಮಾಡಲಾಗುತ್ತಿದೆ. ಇದುವರೆಗೂ ಆಗಸ್ಟ್, ಸೆಪ್ಟಂಬರ್, ಅಕ್ಟೋಬರ್ ಮತ್ತು ನವೆಂಬರ್ ಮಾಹೆಗಳ ಸಹಾಯಧನವನ್ನು ನೇರ ನಗದು ವರ್ಗಾವಣೆ (DBT) ಮೂಲಕ ಪಾವತಿಸಲಾಗಿದೆ. ಡಿಸೆಂಬರ್ ಮಾಹೆಯ ಸಹಾಯಧನ ಜಮೆ ಮಾಡುವುದಕ್ಕೆ ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಮಮಇ 196 ಮಮಅ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.